ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 499 ಗ್ರಾಪಂಅ 2018

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ 27.09.2018

**ಇವರಿಂದ:**

ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

**ಇವರಿಗೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.

**ವಿಷಯ:** 2017–18ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರ ಪ್ರದಾನ ಸಮಾರಂಭಕ್ಕೆ ಹಾಜರಾಗುವ ಬಗ್ಗೆ.

**ಉಲ್ಲೇಖ:** ಸಮಸಂಖ್ಯೆಯ ಸರ್ಕಾರದ ಸುತ್ತೋಲೆ, ದಿನಾಂಕ 27.09.2018

***

2017–18ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರ ಪ್ರದಾನ ಸಮಾರಂಭವನ್ನು ದಿನಾಂಕ 02.10.2018ರ ಗಾಂಧಿ ಜಯಂತಿ ದಿನದಂದು ವಿಧಾನ ಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಬೆಳಿಗ್ಗೆ 11.00ಗಂಟೆಗೆ ಏರ್ಪಡಿಸಲಾಗಿದೆ. ಸದರಿ ಕಾರ್ಯಕ್ರಮವನ್ನು ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ರವರು ಪ್ರಶಸ್ತಿ ಪ್ರದಾನ ಮಾಡಲಿದ್ದು, ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಭಾಗವಹಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ 2017–18ನೇ ಸಾಲಿನ ಗಾಂಧಿ ಗ್ರಾಮ ಪುರಸ್ಕಾರಕ್ಕೆ ಭಾಜನರಾಗಿರುವ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಭಾಗವಹಿಸಿ ಪ್ರಶಸ್ತಿ ಸ್ವೀಕಾರ ಮಾಡಲು ತಿಳಿಸಿದೆ.

ದಿನಾಂಕ 02.10.2018ರಂದು ಸಮಾರಂಭ ಪ್ರಾರಂಭವಾಗುವ ಮುನ್ನ ಬೆಳಿಗ್ಗೆ 09.00ಗಂಟೆಗೆ ಬ್ಯಾಂಕ್ವೆಟ್ ಹಾಲ್‌ನಲ್ಲಿ ಹಾಜರಿದ್ದು ನೋಂದಣಿ ಮಾಡಿಕೊಳ್ಳಲು ಹಾಗೂ ಕಾರ್ಯಕ್ರಮ ಮುಗಿಯುವವರೆಗೂ ಹಾಜರಿರಲು ಪುರಸ್ಕೃತ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಲು ಕೋರಿದೆ.

ಪುರಸ್ಕೃತ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ನೊಂದಣಿ, ಆಸನ ವ್ಯವಸ್ಥೆ ಮತ್ತು ಪ್ರಶಸ್ತಿ ಪಡೆಯುವ ಸಂದರ್ಭದಲ್ಲಿ ಅನಾನುಕೂಲವಾಗದಂತೆ ನೋಡಿಕೊಳ್ಳಲು ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿ ಮಟ್ಟದ ಒಬ್ಬ ಅಧಿಕಾರಿಯನ್ನು ನೋಡಲ್ ಅಧಿಕಾರಿಯನ್ನಾಗಿ ನೇಮಿಸಿ, ಅವರು ಸಹ ಸಮಾರಂಭದಲ್ಲಿ ಭಾಗವಹಿಸಲು ತಿಳಿಸಿದೆ. ಕಾರ್ಯಕ್ರಮಕ್ಕೆ ಹಾಜರಾಗುವ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯತಿ ಅಧ್ಯಕ್ಷರುಗಳು ನಿಯಮಾನುಸಾರ ದಿನ ಭತ್ಯೆ ಹಾಗೂ ಪ್ರಯಾಣ ಭತ್ಯೆ ಪಡೆಯಲು ತಿಳಿಸಲಾಗಿದೆ.

ನಿಮ್ಮ ನಂಬುಗೆಯ,

27/9/18

(ಎಂ.ಕೆ.ಕೆಂಪೇಗೌಡ)
ನಿರ್ದೇಶಕರು (ಪಂ.ರಾಜ್–1) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿ:**

1) ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು ಅಗತ್ಯ ಕ್ರಮಕ್ಕಾಗಿ.
2) ಗಾಂಧಿ ಗ್ರಾಮ ಪುರಸ್ಕೃತ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.